# ಗಡಿಕನ್ನಡಿಗ

www.gadikannadiga.com

ಸಂಪಾದಕ:ಮುರುಗೇಶ ಬಿ.ಶಿವಪೂಜಿ

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:134 RNI NO.KAR KAN/2003/10452:No./PMG/KA/NK/BM/743/24-26 ಮಂಗಳವಾರ ದಿನಾಂಕ: 23-04-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## ಮತದಾನ ಮಹತ್ವ ಕುರಿತು ಜಾಗೃತಿ ಕಾರ್ಯಕ್ರಮ ಜಿಲ್ಲಾಧಿಕಾರಿ ಅವರಿಂದ ಪ್ರತಿಜ್ಞಾ ವಿಧಿ ಬೋಧನೆ



ಗದಗ,ಏಪ್ರಿಲ್ 22: ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ವ್ಯವಸ್ಥಿತ ಮತದಾರರ ಶಿಕ್ಷಣ ಮತ್ತು ಸಹಭಾಗಿತ್ವ ಸಮಿತಿ ಹಾಗೂ ವಿವಿಧ ಇಲಾಖೆಗಳ ಸಹಕಾರದಲ್ಲಿ ಮತದಾನದ ಮಹತ್ವ ಕುರಿತು ಜಾಗೃತಿ ಕಾರ್ಯಕ್ರಮವು ಸೋಮವಾರ ನಡೆಯಿತು.

ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಪ್ರತಿಜ್ಞಾವಿಧಿ ಬೋಧಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಅವರು ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ ಮೇ 7 ರಂದು ನಡೆಯುವ ಮತದಾನದಂದು ಅರ್ಹರೆಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಕೋರಿದರು.

ಪ್ರತಿಯೊಂದು ಮತವೂ ಸಹ ಅಮೂಲ್ಯವಾಗಿದ್ದು, ಅರ್ಹರು ಮತದಾನ ಮಾಡುವುದರ ಜೊತೆಗೆ ಮತ್ತೊಬ್ಬರನ್ನು ಮತದಾನ ಮಾಡಲು ಪ್ರೇರೇಪಿಸಬೇಕು ಎಂದು ಜಿಲ್ಲಾಧಿಕಾರಿ ಅವರು ತಿಳಿಸಿದರು.

ಮತದಾನ ಮಾಡುವುದು 18 ವರ್ಷ ಮೇಲ್ಪಟ್ಟ ಎಲ್ಲ ನಾಗರಿಕರ ಕರ್ತವ್ಯ ಮತ್ತು ಜವಾಬ್ದಾರಿಯಾಗಿದೆ. ಆ ನಿಟ್ಟಿನಲ್ಲಿ ಪ್ರಜಾಪ್ರಭುತ್ವದ ಹಬ್ಬದಲ್ಲಿ ಎಲ್ಲರೂ ಪಾಲ್ಗೊಳ್ಳುವಂತಾಗಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ಕರೆ ನೀಡಿದರು.

ಪ್ರಜಾಪ್ರಭುತ್ವದಲ್ಲಿ ದೃಢವಿಶ್ವಾಸವುಳ್ಳ ಭಾರತದ ಪೌರರಾದ ನಾವು, ನಮ್ಮ ದೇಶದ ಪ್ರಜಾಸತ್ತಾತ್ಮಕ ಸಂಪ್ರದಾಯಗಳು ಮತ್ತು ಮುಕ್ತ, ನ್ಯಾಯಸಮ್ಮತ ಮತ್ತು ಶಾಂತಿಯುತ ಚುನಾವಣೆಗಳ ಘನತೆಯನ್ನು ಎತ್ತಿ ಹಿಡಿಯುತ್ತೇವೆಂದು ಮತ್ತು ಪ್ರತಿಯೊಂದು ಚುನಾವಣೆಯಲ್ಲಿ ನಿರ್ಭೀತರಾಗಿ ಮತ್ತು ಧರ್ಮ, ಜನಾಂಗ, ಜಾತಿ , ಮತ, ಭಾಷೆ ಅಥವಾ ಯಾವುದೇ ಪ್ರೇರೇಪಣೆಗಳ ದಾಕ್ಷಿಣ್ಯಗಳಿಂದ ಪ್ರಭಾವಿತರಾಗದೇ ಮತ ಚಲಾಯಿಸುತ್ತೇವೆಂದು ಪ್ರತಿಜ್ಞಾ ವಿಧಿ ಬೋಧಿಸಿದರು.

ಜಿಲ್ಲಾ ಪಂಚಾಯತ್ ಸಿಇಒ ಎಸ್.ಭರತ್ ಅವರು ಮಾತನಾಡಿ ಅರ್ಹರೆಲ್ಲರೂ ಮತದಾನ ಮಾಡುವುದರ ಜೊತೆಗೆ ಮತ್ತೊಬ್ಬರು ಮತದಾನ ಮಾಡಿರುವುದರ ಬಗ್ಗೆ ಖಾತರಿ ಪಡಿಸಿಕೊಳ್ಳಬೇಕು. ಆ ನಿಟ್ಟಿನಲ್ಲಿ ಜಾಗೃತಿ ಮೂಡಿಸಬೇಕು ಎಂದು ಅವರು ಹೇಳಿದರು.

ಪ್ರಜಾಪ್ರಭುತ್ವ ಹಬ್ಬದಲ್ಲಿ ಮತದಾನ ಮಾಡುವುದು ಅರ್ಹರೆಲ್ಲರ ಹಕ್ಕು ಆಗಿದೆ. ಮತದಾನ ಹೆಚ್ಚಳಕ್ಕೆ ಸ್ವೀಪ್ ಸಮಿತಿ ವತಿಯಿಂದ ಹಲವು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಆ ನಿಟ್ಟಿನಲ್ಲಿ ಶೇಕಡಾವಾರು ಮತದಾನ ಹೆಚ್ಚಳಕ್ಕೆ ಎಲ್ಲರೂ ಕೈ ಜೋಡಿಸಬೇಕು ಎಂದು ಅವರು ಕೋರಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ, ಜಿ.ಪಂ.ಉಪ ಕಾರ್ಯದರ್ಶಿ ಹಾಗೂ ಸ್ವೀಪ್ ಜಿಲ್ಲಾ ನೋಡಲ್ ಅಧಿಕಾರಿ ಸಿ.ಬಿ. ದೇವರಮನಿ, ಉಪ ವಿಭಾಗಾಧಿಕಾರಿ ವೆಂಕಟೇಶ ನಾಯ್ಕ, ಚುನಾವಣಾಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಇತರರಿದ್ದರು.

ಪಾನಕ ವಿತರಣೆ ಸಂದರ್ಭದಲ್ಲಿ ಮತದಾನ ಜಾಗೃತಿ

ನಗರದ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾ ಆಯುಷ್ ಇಲಾಖೆ ವತಿಯಿಂದ ಆರೋಗ್ಯಕರ ಆಯುಷ್ ಪಾನಕ ಪರಿಚಯ ಕಾರ್ಯಕ್ರಮವು ಸೋಮವಾರ ನಡೆಯಿತು.

ಚಿಂಚಾ ಪಾನಕ ವಿತರಣೆಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ಚಾಲನೆ ನೀಡಿದರು. ಆ ಸಂದರ್ಭದಲ್ಲಿ ಮತದಾನ ಮಹತ್ವ ಕುರಿತು ಜಾಗೃತಿ ಮೂಡಿಸಲಾಯಿತು. ಜಿ.ಪಂ.ಸಿ.ಇ.ಒ ಎಸ್. ಭರತ್, ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ, ಜಿಲ್ಲಾ ಆಯುಷ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಇದ್ದರು.

## ವಿಶ್ವ ಭೂಮಿ ದಿನಾಚರಣೆ

ಗೋಕಾಕ: ತಾಲೂಕು ಕಾನೂನು ಸೇವೆಗಳ ಸಮಿತಿ ಗೋಕಾಕ , ನ್ಯಾಯವಾದಿಗಳ ಸಂಘ, ಅರಣ್ಯ ಇಲಾಖೆ ಹಾಗೂ ತಾಲೂಕು ಆರೋಗ್ಯ ಇಲಾಖೆ ಇವುಗಳ ಸಂಯುಕ್ತಾಶ್ರಯದಲ್ಲಿ ಸೋಮವಾರದಂದು ನಗರದ ಸರಕಾರಿ ಆಸ್ಪತ್ರೆ ಆವರಣದಲ್ಲಿ ವಿಶ್ವ ಭೂಮಿ ದಿನಾಚರಣೆಯನ್ನು ಸಸಿಗೆ ನೆಡುವ ಮೂಲಕ ಆಚರಿಸಲಾಯಿತು.ಆವರಣದಲ್ಲಿ ವಿಶ್ವ ಭೂಮಿ ದಿನಾಚರಣೆಯನ್ನು ಸಸಿಗೆ ನೆಡುವ ಮೂಲಕ ಆಚರಿಸಲಾಯಿತು.

## ಲೋಕಸಭಾ ಚುನಾವಣೆ: 8 ಅಭ್ಯರ್ಥಿಗಳು ನಾಮಪತ್ರ ವಾಪಸ್ ಅಂತಿಮ ಕಣದಲ್ಲಿ 13 ಅಭ್ಯರ್ಥಿಗಳು: ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ



ಬೆಳಗಾವಿ.ಏ.-: 02-ಬೆಳಗಾವಿ ಲೋಕಸಭಾ ಚುನಾವಣೆಗೆ ಸ್ಪರ್ಧಿಸಿ ಒಟ್ಟು 21 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದು, ನಾಮಪತ್ರ ಹಿಂಪಡೆಯಲು ಕೊನೆಯ ದಿನಾಂಕವಾದ ಸೋಮವಾರ (ಏ.22) ಒಟ್ಟು 8 ಅಭ್ಯರ್ಥಿಗಳು ತಮ್ಮ ನಾಮಪತ್ರವನ್ನು ವಾಪಸ್ ಪಡೆದಿರುವುದರಿಂದ ಅಂತಿಮ ಕಣದಲ್ಲಿ ಒಟ್ಟು 13 ಅಭ್ಯರ್ಥಿಗಳು ಉಳಿದಿರುತ್ತಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ನತೇಶ್ ಪಾಟೀಲ ಅವರು ತಿಳಿಸಿದ್ದಾರೆ.

ನಾಮಪತ್ರ ವಾಪಸ್ ಪಡೆದ ಅಭ್ಯರ್ಥಿಗಳ ವಿವರ: ಹಣಮಂತ ಶಿವಪ್ಪ ನಾಗನೂರ (ಪಕ್ಷೇತರ), ಈಶ್ವರ ಚಿಕ್ಕನರಗುಂದ (ಪಕ್ಷೇತರ),3 ದೊಡ್ಡಪ್ಪ ಈರಪ್ಪಾ ದೊಡಮನಿ (ಪಕ್ಷೇತರ),ಭಾರತಿ ಬೈಲಪ್ಪ ನೀರಲಕೇರಿ (ಪಕ್ಷೇತರ),ಸಾಗರ ಪಾಟೀಲ (ಪಕ್ಷೇತರ) ,ಮಗದುಮ್ ಇಸ್ಮಾಯಿಲ್ ಮಗದುಮ್ (ಪಕ್ಷೇತರ), ಮಹಾಂತೇಶ ಬಿ ನಿರ್ವಾಣಿ (ಪಕ್ಷೇತರ),ಮಹಾಂತೇಶ ಗೌಡರ (ಪಕ್ಷೇತರ), ಅಂತಿಮ ವಾಗಿ ಕಣದಲ್ಲಿ ಉಳಿದ ಅಭ್ಯರ್ಥಿಗಳು:ಮಲ್ಲಪ್ಪ ಚೌಗಲಾ (ಉತ್ತಮ ಪ್ರಜಾಕೀಯ ಪಕ್ಷ),ಜಗದೀಶ ಶೆಟ್ಟರ್ (ಬಿಜೆಪಿ),ಬಸಪ್ಪ ಗುರುಸಿದ್ದಪ್ಪ ಕುಂಬಾರ (ಕರ್ನಾಟಕ ರಾಷ್ಟ್ರ ಸಮಿತಿ)ಮೃಣಾಲ ಹೆಬ್ಬಾಳಕರ (ಕಾಂಗ್ರೆಸ್ ಪಕ್ಷ),ರವಿ ಪಡಸಲಗಿ (ಪಕ್ಷೇತರ),ಅಶೋಕ ಅಪ್ಪುಗೋಳ (ಬಹುಜನ ಸಮಾಜ ಪಾರ್ಟಿ),ಪುಂಡಲೀಕ ಇಟ್ನಾಳ (ಪಕ್ಷೇತರ),ಅಶೋಕ ಪಾಂಡಾಪ್ಪಾ ಹಣಜಿ (ಪಕ್ಷೇತರ),ಲಕ್ಷ್ಮಣ ಜಡಗಣ್ಣನವರ (ಎಸ್.ಯು. ಸಿ.ಐ.ಸಿ),ಮಹಾದೇವ ಪಾಟೀಲ (ಪಕ್ಷೇತರ),ನಿತಿನ ಅಶೋಕ ಮಹಾಡಗುತ (ಪಕ್ಷೇತರ),ಅಶ್ಪಕ್ ಅಹಮದ ಉಸ್ತಾದ (ಪಕ್ಷೇತರ),ವಿಜಯ ಮೇತ್ರಾಣಿ (ಅಖಿಲ ಭಾರತೀಯ ಹಿಂದೂ ಮಹಾಸಭಾ).

## ಏಪ್ರಿಲ್ 26ರಂದು ಚಿತ್ರದುರ್ಗ ಜಿಲ್ಲೆಯಲ್ಲಿ ಮತದಾನ: ಶಾಂತಿಯುತ ಮತದಾನಕ್ಕಾಗಿ ವಿಜಯನಗರ ಜಿಲ್ಲೆಯ ಗಡಿಭಾಗದಲ್ಲಿ ಮದ್ಯಪಾನ ನಿಷೇಧ

ಹೊಸಪೇಟೆ (ವಿಜಯನಗರ ಜಿಲ್ಲೆ) ಏಪ್ರೀಲ್ 22 : ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ರ ಸಂಬಂಧ ಚಿತ್ರದುರ್ಗ ಜಿಲ್ಲೆಯಲ್ಲಿ ನಡೆಯುವ ಮತದಾನ ದಿನದಂದು ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಸಲುವಾಗಿ ವಿಜಯನಗರ ಜಿಲ್ಲೆಯ ಗಡಿಭಾಗದಲ್ಲಿ ಮದ್ಯಪಾನ ನಿಷೇಧಿಸಿ, ಒಣ ದಿನಗಳೆಂದು ಘೋಷಿಸಿ ಜಿಲ್ಲಾಧಿಕಾರಿಗಳಾದ ಎಂ.ಎಸ್.ದಿವಾಕರ ಅವರು ಆದೇಶ ಹೊರಡಿಸಿದ್ದಾರೆ.

ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ಸಂಬಂಧ ಚಿತ್ರದುರ್ಗ ಜಿಲ್ಲೆಯಲ್ಲಿ ಮೊದಲ ಹಂತದ ಮತದಾನವು ಏಪ್ರಿಲ್ 26 ರಂದು ನಡೆಯಲಿದ್ದು, ಚಿತ್ರದುರ್ಗ ಜಿಲ್ಲಾ ಗಡಿಭಾಗದಲ್ಲಿ ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲೂಕು ಬರುವುದರಿಂದ ಗಡಿಭಾಗದಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಹಾಗೂ ಅಬಕಾರಿ ಅಕ್ರಮಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ವಿಜಯನಗರ ಜಿಲ್ಲೆಯ ಗಡಿಭಾಗದ 5 ಕಿ.ಮೀ ವ್ಯಾಪ್ತಿಯಲ್ಲಿ ಏಪ್ರಿಲ್ 24ರ ಸಂಜೆ 6 ರಿಂದ ಏಪ್ರೀಲ್ 26ರ ಸಂಜೆ 6 ಗಂಟೆಯವರೆಗೆ ಎಲ್ಲಾ ಬಗೆಯ ಮದ್ಯದ ಅಂಗಡಿಗಳನ್ನು ಮುಚ್ಚುವಂತೆ ಮತ್ತು ಮದ್ಯ ಮಾರಾಟ, ತಯಾರಿಕೆ, ಮದ್ಯ ಸಾಗಾಣಿಕೆ ಹಾಗೂ ಇತರೆ ಸ್ಥಳಗಳಾದ ಬಾರ್ & ರೆಸ್ಟೋರೆಂಟ್, ಕ್ಲಬ್, ಹೋಟೆಲ್ ಡಾಬಾಗಳಲ್ಲಿ ಮದ್ಯ ಸಾಗಾಣಿಕೆ, ಶೇಖರಣೆ ಮತ್ತು ಮಾರಾಟ ಮಾಡುವುದನ್ನು ನಿಷೇಧಿಸಿ ಒಣ ದಿನಗಳೆಂದು ಎಂದು ಘೋಷಿಸುವಂತೆ ವಿಜಯನಗರ ಜಿಲ್ಲೆಯ ಅಬಕಾರಿ ಉಪ ಆಯುಕ್ತರು ಕೋರಿದ್ದಾರೆ.

ಅದರಂತೆ ಚಿತ್ರದುರ್ಗ ಜಿಲ್ಲೆಯಲ್ಲಿ ಮೊದಲ ಹಂತದ ಮತದಾನ ಪ್ರಕ್ರಿಯೆಯು ಮುಕ್ತವಾಗಿ ಹಾಗೂ ಶಾಂತಿಯುತವಾಗಿ ನಡೆಯಲು ಅನುಕೂಲವಾಗುವಂತೆ ಪ್ರಜಾ ಪ್ರಾತಿನಿಧಿ ಕಾಯ್ದೆ 1951 ರ ಸೆಕ್ಷನ್ 135(ಸಿ) ಹಾಗೂ ಅಬಕಾರಿ ಸನ್ನದುಗಳು (ಸಾಮಾನ್ಯ ಷರತ್ತುಗಳು) ನಿಯಮ 1967 ರ ಅಧಿನಿಯಮ 10 (ಬಿ) ಪ್ರಕಾರ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಏಪ್ರೀಲ್ 24ರ ಸಂಜೆ 6 ಗಂಟೆಯಿಂದ ಏಪ್ರೀಲ್ 26ರ ಸಂಜೆ 6 ಗಂಟೆಯವರೆಗೆ ಚಿತ್ರದುರ್ಗ ಜಿಲ್ಲೆಯ ಗಡಿಭಾಗದಿಂದ 5 ಕಿ.ಮೀ. ವ್ಯಾಪ್ತಿಯಲ್ಲಿ (ವಿಜಯನಗರ ಜಿಲ್ಲಾ ವ್ಯಾಪ್ತಿಗೆ ಒಳಪಟ್ಟಂತೆ) ಬರುವ ಎಲ್ಲಾ ಬಗೆಯ ಮದ್ಯದ ಅಂಗಡಿಗಳನ್ನು ಮುಚ್ಚುವಂತೆ ಮತ್ತು ಮದ್ಯ ಮಾರಾಟ, ತಯಾರಿಕೆ, ಮದ್ಯ ಸಾಗಾಣಿಕೆ ಹಾಗೂ ಇತರೆ ಸ್ಥಳಗಳಾದ ಬಾರ್ & ರೆಸ್ಟೋರೆಂಟ್, ಕ್ಲಬ್, ಹೋಟೆಲ್ ಡಾಬಾಗಳಲ್ಲಿ ಮದ್ಯ ಸಾಗಾಣಿಕೆ, ಶೇಖರಣೆ ಮತ್ತು ಮಾರಾಟ ಮಾಡುವುದನ್ನು ನಿಷೇಧಿಸಿ ಒಣ ದಿನಗಳೆಂದು ಘೋಷಿಸಿ ಜಿಲ್ಲಾಧಿಕಾರಿಗಳು ಆದೇಶಿಸಿದ್ದಾರೆ.

ಜಿಲ್ಲಾ ಪೋಲೀಸ್ ಅಧೀಕ್ಷಕರು ಹಾಗೂ ಅಬಕಾರಿ ಉಪ ಆಯುಕ್ತರು ಈ ಆದೇಶವನ್ನು ಅನುಷ್ಠಾನಕ್ಕೆ ತರಲು ಅಗತ್ಯ ಕಟ್ಟುನಿಟ್ಟಿನ ಕ್ರಮಗಳನ್ನು ಜರುಗಿಸಬೇಕು ಎಂದು ಆದೇಶದಲ್ಲಿ ತಿಳಿಸಲಾಗಿದೆ.

## ಬೆಳಗಾವಿಯಲ್ಲಿ ನೇಹಾ ಕೊಲೆಗೆ ಸಿಡಿದೆದ್ದ ಸಂಘಟನೆಗಳು




ಬೆಳಗಾವಿ: ಹುಬ್ಬಳ್ಳಿ ಖಾಸಗಿ ಕಾಲೇಜಿನ ಎಂಸಿಎ ವಿದ್ಯಾರ್ಥಿನಿ ನೇಹಾ ಹಿರೇಮಠ ಕೊಲೆ ಆರೋಪಿಗೆ ಗಲ್ಲು ಶಿಕ್ಷೆ ವಿಧಿಸು ವಂತೆ ಆಗ್ರಹಿಸಿ ಜಾಗೃತ ಮಹಿಳಾ ವೇದಿಕೆ ಹಾಗೂ ವಿವಿಧ ಸಂಘಟನೆಗಳಿಂದ ಪ್ರತಿಭಟನೆ ನಡೆಸಲಾಯಿತು ಹುಬ್ಬಳ್ಳಿಯ ಖಾಸಗಿ ಕಾಲೇಜಿನ ಎಂಸಿಎ ವಿದ್ಯಾರ್ಥಿನಿ ನೇಹಾ ಹಿರೇಮಠ ಕೊಲೆ ಆರೋಪಿಗೆ ಗಲ್ಲು ಶಿಕ್ಷೆ ವಿಧಿಸು ವಂತೆ ಆಗ್ರಹಿಸಿ ಸೋಮ ವಾರ ಬೆಳಗಾವಿ ಜಾಗೃತ ಮಹಿಳಾ ವೇದಿಕೆ ಹಾಗೂ ,ಬೆಳಗಾವಿ ನ್ಯಾಯವಾಧಿ ಗಳ ಸಂಘಟನೆ, ವೈದ್ಯಕೀಯ ಸಂಘಟನೆ, ನರ್ಸಿಂಗ ಸಂಘಟನೆಗಳಿಮದ ಚನ್ನಮ್ಮ ವೃತ್ತದಲ್ಲಿ ಪ್ರತ್ಯೇಕವಾಗಿ ಪ್ರತಿಭಟನೆ ನಡೆಸಿ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

(2 ನೇ ಪುಟಕ್ಕೆ)

## ಲೋಕಸಭಾ ಚುನಾವಣೆ: ಅಭ್ಯರ್ಥಿಗಳ ಖರ್ಚು-ವೆಚ್ಚ, ಲೆಕ್ಕಪತ್ರಗಳ ಮಾಹಿತಿ ಸಲ್ಲಿಸಲು ಸೂಚನೆ

ಬೆಳಗಾವಿ.ಏ.-: ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿಗಳು ಚುನಾವಣಾ ಪ್ರಚಾರ ಅವಧಿಯಲ್ಲಿ ತಮ್ಮ ಚುನಾವಣಾ ಖರ್ಚು-ವೆಚ್ಚಗಳ ಮಾಹಿತಿಯನ್ನು ಕಡ್ಡಾಯವಾಗಿ ಮೂರು ಬಾರಿ ಚುನಾವಣಾ ವೆಚ್ಚ ವೀಕ್ಷಕರಿಗೆ ಸಲ್ಲಿಸಬೇಕು ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳಾದ ರಾಹುಲ ಶಿಂಧೆ ಅವರು ತಿಳಿಸಿದ್ದಾರೆ. 01-ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣಾ ಕಣದಲ್ಲಿರುವ ಅಭ್ಯರ್ಥಿಗಳು ಚುನಾವಣಾಧಿಕಾರಿಗಳ ಕಾರ್ಯಾಲಯ, ಬಸವ ಸರ್ಕಲ್, ತಾಲೂಕು ಆಡಳಿತ ಸೌಧ, ಚಿಕ್ಕೋಡಿ ಇಲ್ಲಿ ಈ ಕೆಳಕಂಡ ಮೂರು ದಿನಾಂಕಗಳಂದು ಬೆಳಿಗ್ಗೆ 11 ಗಂಟೆಗೆ ತಮ್ಮ ಲೆಕ್ಕಪತ್ರಗಳನ್ನು ಪರಿಶೀಲನೆಗೆ ಸಲ್ಲಿಸಬೇಕು ಎಂದು ತಿಳಿಸಿದ್ದಾರೆ. ಮೊದಲ ಪರಿಶೀಲನೆ- 26-4-2024 , ಎರಡನೇ ಪರಿಶೀಲನೆ- 30-4-2024 , ಮೂರನೇ ಪರಿಶೀಲನೆ 04-05-2024


ಎಲ್ಲ ಅಭ್ಯರ್ಥಿಗಳು ನಿಗದಿತ ದಿನಾಂಕಗಳಂದು ಮಾಹಿತಿಯನ್ನು ಸಲ್ಲಿಸಬೇಕು ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೋಲಿನ ಹತಾಶೆಯಲ್ಲಿ ಮೃಣಾಲ್ ಹೆಬ್ಬಾಳ್ಕರ್ ಸಂಸದ ಮಂಗಳಾ ಅಂಗಡಿ ವಾಗ್ದಾಳಿ



ಬೆಳಗಾವಿ: ಈ ಬಾರಿ ಲೋಕಸಭೆ ಚುನಾವಣೆಯಲ್ಲಿ ಮತದಾರರು ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಳರ್ ಹೀನಾಯವಾಗಿ ಸೋಲಿಸಲಿದ್ದಾರೆ. ಅವರು ಸುಳ್ಳು ಆರೋಪ ಮಾಡುತ್ತಿದ್ದು ಇದಕ್ಕೆ ಕೇಸ್ ದಾಖಲು ಮಾಡಲಾಗುವುದು ಎಂದು ಸಂಸದೆ ಮಂಗಲ ಅಂಗಡಿ ವಾಗ್ದಾಳಿ ನಡೆಸಿದರು. ನಗರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ದ್ರೋಹ, ಹಿಂದು ವಿರೋಧಿ ಯನ್ನು ಕ್ಷೇತ್ರದ ಜನರು ಮರೆತಿಲ್ಲ. ಮನೆ ಮಗಳಿಗೆ ಕಲಿಸಿದ ಪಾಠವನ್ನು ಮನೆ ಮಗನಿಗೂ ಕಲಿಸಲಿದ್ದಾರೆ. ಇವರ ಡ್ರಾಮಾ ಎಲ್ಲರಿಗೂ ಗೊತ್ತಿದೆ ಎಂದು ಕಿಡಿಕಾರಿದರು. ಕಳೆದ 20 ವರ್ಷದಲ್ಲಿ ನಾವು 16 ಸಾವಿರ ಕೋಟಿ ರೂ.ಗಳ ಅನುದಾನ ತಂದು ಬೆಳಗಾವಿ ಲೋಕಸಭಾ ಮತಕ್ಷೇತ್ರದ ಅಭಿವೃದ್ಧಿ ಮಾಡಿದ್ದೇವೆ. ಮೃಣಾಲ್ ಸೋಲಿನ ಹತಾಶೆಯಲ್ಲಿ ಬೇಕಾದನ್ನು ಮಾತನಾಡುವುದಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಕಾಂಗ್ರೆಸ್ ರೈತರು, ವಿದ್ಯಾರ್ಥಿಗಳು, ದಲಿತರಿಗೆ ಚಂಬು ಕೊಟ್ಟಿದೆ: ಬೊಮ್ಮಾಯಿ



ಬೆಂಗಳೂರು: ರಾಜ್ಯ ಕಾಂಗ್ರೆಸ್ ಸರ್ಕಾರ ಪೂರ್ವ ಸಿದ್ದತೆ ಇಲ್ಲದ ಗ್ಯಾರೆಂಟಿ ಹೆಸರಿನಲ್ಲಿ ರಾಜ್ಯವನ್ನು ದಿವಾಳಿ ಮಾಡಿದ್ದು, ಆರ್ಥಿಕ ವಿಚಾರದಲ್ಲಿ ಹತಾಶರಾಗಿ ತೀರ ಕೆಳಮಟ್ಟಕ್ಕೆ ಇಳಿದಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಹತ್ತು ವರ್ಷದ ಎನ್ ಡಿ ಎ ಆಡಳಿತದಲ್ಲಿ ಸಾಕಷ್ಟು ಬದಲಾವಣೆ ಆಗಿದೆ. ವಿಪತ್ತು ನಿರ್ವಹಣಾ ಮಾನದಂಡ ಬದಲಾಗಿದೆ. ಕೇಂದ್ರದಿಂದ ರಾಜ್ಯಕ್ಕೆ ಬರುವ ತೆರಿಗೆ ಪಾಲಿನ ಹಣ ಹೆಚ್ಚಿಗೆ ಬಂದಿದೆ. ಇದೆಲ್ಲವನ್ನೂ ರಾಜ್ಯ ಸರ್ಕಾರ ಮರೆಮಾಚಿದೆ. ತನ್ನ ತಪ್ಪು ಮುಚ್ಚಿಕೊಳ್ಳಲು ತೀರ ತಳಮಟ್ಟಕ್ಕೆ ಹೋಗಿ ಕಾಂಗ್ರೆಸ್ ನಡೆದುಕೊಳ್ಳುತ್ತಿದೆ. ಹಣಕಾಸು ವಿಚಾರದಲ್ಲಿ ಹತಾಶರಾಗಿ ಕಾಂಗ್ರೆಸ್ ನಾಯಕರಿ ತೀರ ಕೆಳಮಟ್ಟದ ಭಾಷೆ ಬಳಸುತ್ತಿದ್ದಾರೆ ಎಂದು ಹೇಳಿದರು.

**ಕಾಂಗ್ರೆಸ್ ನವರಿಗೆ ಮೋದಿ ಶನಿನೇ**

ಕಾಂಗ್ರೆಸ್ ನಾಯಕ ರಮೇಶ್ ಕುಮಾರ್ ಪ್ರಧಾನ ನರೇಂದ್ರ ಮೋದಿಯವರ ಕುರಿತು ಆಡಿರುವ ಮಾತಿಗೆ ತಿರುಗೇಟು ನೀಡಿದ ಬಸವರಾಜ ಬೊಮ್ಮಾಯಿ, ರಮೇಶ್ ಕುಮಾರ್ ಅವರು ಎಷ್ಟು ಸತ್ಯವಂತರು ಎನ್ನುವುದು ಎಲ್ಲರಿಗೂ ಗೊತ್ತಿದೆ. ಮೋದಿಯವರು ರಮೇಶ್ ಕುಮಾರ್ ಮತ್ತು ಕಾಂಗ್ರೆಸ್ ಗೆ ಶನಿಯಾಗಿದ್ದಾರೆ. ಯಾರು ಭ್ರಷ್ಟಾಚಾರ ಮಾಡುತ್ತಾರೆ, ಯಾರು ದೇಶವಿರೊಧಿ ಚಟುವಟಿಕೆ ಮಾಡುತ್ತಾರೆ. ಯಾರು ಜನವಿರೋಧಿ ಕೆಲಸ ಮಾಡುತ್ತಾರೆ ಅವರಿಗೆ ಮೋದಿಯವರು ಶನಿಯಾಗಿ ಕಾಡುತ್ತಾರೆ. ದೇಶಭಕ್ತರಿಗೆ, ಯುವಕರಿಗೆ, ಹೆಣ್ಣುಮಕ್ಕಳಿಗೆ ಅವರು ವರವನ್ನು ಕೊಡುತ್ತಾರೆ. ರಮೇಶ್ ಕುಮಾರ್ ಅವರಿಗೆ ಅದರ ಒಳ ಮರ್ಮ ಗೊತ್ತಿದೆ ಎಂದು ತಿರುಗೇಟು ನೀಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರಾಜ್ಯದಿಂದ ಕೇಂದ್ರಕ್ಕೆ ನಾಲ್ಕು ಲಕ್ಷಕೋಟಿ ತೆರಿಗೆ ಕೊಡುತ್ತೇವೆ ಎನ್ನುತ್ತಾರೆ. ಆದರೆ, ಕೇಂದ್ರದ ನೇರ ತೆರಿಗೆ, ರಾಜ್ಯಕ್ಕೆ ನೀಡುವ ತೆರಿಗೆ ಪಾಲಿಮ ಹಂಚಿಕೆ ಪಾಲಿನಲ್ಲಿ ಬರುವುದಿಲ್ಲ. ಅದು ಪ್ರಥಮ ಪ್ರಧಾನ ಜವಾಹರಲಾಲ ನೆಹರೂ ಅವರ ಕಾಲದಿಂದ ಇದೆ. ಈ ಪದ್ದತಿ ಜಿಎಸ್ಟಿಗೆ ಮಾತ್ರ ಅನ್ವಯವಾಗತ್ತದೆ ಎಂದರು.

ಕಾಂಗ್ರೆಸ್ ನವರು ಕೇವಲ ಆರೋಪ ಮಾಡುವ ಬದಲು ಯುಪಿಎ ಅವಧಿ ಹಾಗೂ ಎನ್ ಡಿಎ ಅವಧಿಯಲ್ಲಿ ರಾಜ್ಯಕ್ಕೆ ಎಷ್ಟು ಅನುದಾನ ಹಾಗೂ ತೆರಿಗೆ ಪಾಲಿನಹಣ ಬಂದಿದೆ ಎಂದು ಹೋಲಿಕೆ ಮಾಡಿ ನೋಡಲಿ. 2004-2014 ರ ಯುಪಿಎ ಅವಧಿಯಲ್ಲಿ 81,795 ಕೋಟಿ ರೂ. ತೆರಿಗೆ ಪಾಲಿನ ಹಣ ಬಂದಿದೆ. 2014-2024 ರ ಎನ್ ಡಿಎ ಅವಧಿಯಲ್ಲಿ 2,82,791 ಕೋಟಿ ರೂ. ರಾಜ್ಯಕ್ಕೆ ಬಂದಿದೆ.

ಯುಪಿಎ ಸರ್ಕಾರದ ಅವಧಿಯಲ್ಲಿ 4 ಪೈಸೆ ರಾಜ್ಯಕ್ಕೆ ಬರುತ್ತಿತ್ತು ಈಗ 13 ರೂ. ಸಿಗುತ್ತಿದೆ ಎಂದು ಬೊಬ್ಬೆ ಹೊಡಿತ್ತಿದ್ದಾರೆ 2004-2014 ರ ಯುಪಿಎ ಅವಧಿಯಲ್ಲಿ ಕೇಂದ್ರದ ಅನುದಾನ 60,799 ಕೋಟಿ ಬಂದಿದೆ. 2014-24 ರ ವರೆಗಿನ ಪ್ರಧಾನ ನರೇಂದ್ರ ಮೋದಿ ಅವಧಿಯಲ್ಲಿ 2,33,93 ಕೋಟಿ ರೂ. ಅನುದಾನ ಬಂದಿದೆ. ರಾಜ್ಯಕ್ಕೆ ಕೇಂದ್ರ ಅಭಿವೃದ್ಧಿ ಕಾರ್ಯ ಕೈಗೊಳ್ಳಲು ಕರ್ನಾಟಕಕ್ಕೆ 6012 ಕೋಟಿ ರೂ. ಬಡ್ಡಿ ರಹಿತ ಸಾಲ ನೀಡಿದ್ದು, 50 ವರ್ಷಗಳ ಬಳಿಕ ಸಾಲ ಮರಳಿಸಲು ಅವಕಾಶ ಕಲ್ಪಿಸಲಾಗಿದೆ. ಕೇಂದ್ರದಲ್ಲಿ ಪ್ರಧಾನ ನರೇಂದ್ರ ಮೋದಿ ನೇತೃತ್ವದ ಎನ್ ಡಿಎ ಸರ್ಕಾರ ಅಧಿಕಾರಕ್ಕೆ ಬರುವ ಮುನ್ನ ಎಲ್ಲ ರಾಜ್ಯ ಸರ್ಕಾರಗಳಿಗೆ ಶೇ 27% ತೆರಿಗೆ ಪಾಲು ಬರುತ್ತಿತ್ತು. ಅದನ್ನು ಯುಪಿಎ ಅವಧಿಯಲ್ಲಿ ಶೇ 37% ಹೆಚ್ಚಿಸಬೇಕ 'ಂದು ಎಲ್ಲ ರಾಜ್ಯಗಳು ಒತ್ತಾಯ ಮಾಡಿದ್ದವು. ಕಾಂಗ್ರೆಸ್ ಸರ್ಕಾರ ಹೆಚ್ಚಳ ಮಾಡಲಿಲ್ಲ. ನರೇಂದ್ರ ಮೋದಿ ಸರ್ಕಾರ ಬಂದ ಮೇಲೆ ಅದನ್ನು ಶೇ 40% ಕ್ಕೆ ಏರಿಸಿದ್ದಾರೆ ಎಂದು ಹೇಳಿದರು.

(2 ನೇ ಪುಟಕ್ಕೆ)